ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಎಂವೈಎಸ್\639\2017\ಸನಿಕಾಸ-1 ಬಹುಮಹಡಿಗಳ ಕಟ್ಟಡ,
ಡಾ||ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:25/10/2017

ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

ವಿಷಯ: ದೂರುದಾರರಾದ ಶ್ರೀ.ಪಿ.ರಾಜಣ್ಣ, #81-82, ಹೆಚ್‌ಡಿ ಕೋಟೆ ರಸ್ತೆ, ಹುಣಸೂರು, ಮೈಸೂರು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ಮೈಸೂರು ಜಿಲ್ಲೆ ಹುಣಸೂರು ಹೆಚ್‌ಡಿ ಕೋಟೆ ರಸ್ತೆ ನಂ.81-82 ನಿವಾಸಿಯಾದ ಶ್ರೀ.ಪಿ.ರಾಜಣ್ಣ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಮೈಸೂರು ಜಿಲ್ಲೆ ಹುಣಸೂರು ನಗರಸಭೆಯ ಪೌರಾಯುಕ್ತರಾದ ಶ್ರೀ.ಶಿವಪ್ಪ ನಾಯಕ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ಮೈಸೂರು ಜಿಲ್ಲೆ ಹುಣಸೂರು ಪಟ್ಟಣ ಜ್ಯೋತಿ ನಗರದ ಖಾತಾ ಸಂ.33624, 401.73 ಮತ್ತು 3625.401.74ರ ಸ್ವತ್ತು ಶ್ರೀ.ಲೋಕೇಶ್ ಬಿನ್ ಗೋವಿಂದೇಗೌಡರಿಗೆ ಸೇರಿದ್ದು, ಸದರಿ ಸ್ವತ್ತಿನ ಮಾಲೀಕರು ಸಾರ್ವಜನಿಕ ರಸ್ತೆಯನ್ನು ಆಕ್ರಮಿಸಿ ಹಾಗೂ ಸೆಟ್ ಬ್ಯಾಕ್ ಬಿಡದೇ ಅನಧಿಕೃತವಾಗಿ ಸೆಲ್ಲಾರ್ ನಿರ್ಮಿಸಿ ಕಟ್ಟಡ ಕಟ್ಟಿದ್ದಾರೆ. ಈ ಬಗ್ಗೆ ಎದುರುದಾರರಿಗೆ ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

3. ದೂರಿನ ಬಗ್ಗೆ ಎದುರುದಾರರಿಂದ ವರದಿಯನ್ನು ಕೇಳಲಾಗಿ, ಎದುರುದಾರರು ತಮ್ಮ ವರದಿಯಲ್ಲಿ -

ಸದರಿ ಕಟ್ಟಡದ ಮಾಲೀಕರು ತಮ್ಮ ಕಛೇರಿಯಿಂದ ನೆಲ ಅಂತಸ್ತು 77.02 ಚದರ ಮೀಟರ್ ಹಾಗೂ 1ನೇ ಅಂತಸ್ತು 72.02 ಒಟ್ಟು 231.02 ಚದರ ಮೀಟರ್ ಕಟ್ಟಡ ನಿರ್ಮಾಣ ಮಾಡಲು ಪರವಾನಗಿ ಕೋರಿದ್ದು, ಅದರಂತೆ ಕಟ್ಟಡದ ಮಾಲೀಕರು ಕಟ್ಟಡ ನಿರ್ಮಾಣ ಮಾಡಿಲ್ಲ. ಈ ಬಗ್ಗೆ ದೂರುದಾರರು ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರವರ ಕಾರ್ಯಾಲಯಕ್ಕೆ

ಅರ್ಜಿ ಸಲ್ಲಿಸಿದ್ದು, ಆ ಪ್ರಕಾರ ತಮಗೆ ನಿರ್ದೇಶನ ನೀಡಿದ್ದು, ಅದರಂತೆ ಸದರಿ ಕಟ್ಟಡವನ್ನು 7 ದಿನಗಳೊಳಗಾಗಿ ತೆರವುಗೊಳಿಸುವಂತೆ ತಿಳುವಳಿಕೆ ನೋಟೀಸ್ ನೀಡಲಾಗಿದೆ. ಆದರೂ ಸಹ ಸದರಿ ಕಟ್ಟಡದ ಮಾಲೀಕರು ಕಟ್ಟಡ ತೆರವುಗೊಳಿಸಿಲ್ಲ. ದೂರುದಾರರು ಸದರಿ ಕಟ್ಟಡದ ಮಾಲೀಕರ ವಿರುದ್ಧ ಹುಣಸೂರು ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಅಸಲು ದಾವಾ ಸಂ:285/2016ರಂತೆ ಪ್ರಕರಣ ದಾಖಲಾಗಿದೆ. ನಂತರ, ದೂರುದಾರರು ಮೈಸೂರು ಜಿಲ್ಲಾಧಿಕಾರಿಯವರಿಗೆ ದೂರು ನೀಡಿದ್ದು, ಸದರಿಯವರು ಹಾಗೂ ಯೋಜನಾ ನಿರ್ದೇಶಕರು ಸ್ಥಳ ಪರಿಶೀಲನೆ ಮಾಡಿ, ಅನಧಿಕೃತ ಕಟ್ಟಡವನ್ನು ತೆರವುಗೊಳಿಸುವ ಬಗ್ಗೆ ನಿರ್ದೇಶನ ನೀಡಿದ್ದಾರೆ. ಅದರಂತೆ ಕಾನೂನು ಸಲಹೆಗಾರರ ಅಭಿಪ್ರಾಯ ಪಡೆದು ಸದರಿ ಕಟ್ಟಡದ ಮಾಲೀಕರಿಗೆ ನೋಟೀಸ್ ನೀಡಲಾಗಿ, ಸದರಿಯವರು ತಾವು ಯಾವುದೇ ಸ್ಥಳ ಒತ್ತುವರಿ ಮಾಡಿಲ್ಲವೆಂದು ಹೇಳಿದ್ದಾರೆ. ನಂತರ ಯೋಜನಾ ನಿರ್ದೇಶಕರು ತಮಗೆ ಸದರಿ ಕಟ್ಟಡದ ಅನಧಿಕೃತ ಭಾಗವನ್ನು ತೆರವುಗೊಳಿಸದೇ ಇರುವ ಬಗ್ಗೆ ಕಾರಣ ಕೇಳಿ ನೋಟೀಸ್ ನೀಡಿದ್ದು, ಈ ಬಗ್ಗೆ ಪ್ರತ್ಯುತ್ತರ ನೀಡಿದೆ. ಪುನಃ ತಾವು ಸದರಿ ಕಟ್ಟಡದ ಮಾಲೀಕರಿಗೆ ನೋಟೀಸ್ ನೀಡಿರುವ ಬಗ್ಗೆ ಹಿಂಬರಹ ನೀಡಿದ್ದು, ಸದರಿ ಕಟ್ಟಡದ ಮಾಲೀಕರು ನಕ್ಷೆಗೆ ವಿರುದ್ಧವಾಗಿ ಕಟ್ಟಡ ನಿರ್ಮಿಸಿರುವುದರಿಂದ ಹಾಗೂ ಈ ಬಗ್ಗೆ ಪ್ರಕರಣ ಬಾಕಿ ಇರುವುದರಿಂದ ಯಾವುದೇ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ. ಅಂತಿಮವಾಗಿ, ದಿ:09/05/17ರಂದು ಸದರಿ ಕಟ್ಟಡದ ಅನಧಿಕೃತ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ವಹಿಸಲಾಗುವುದೆಂದು ಹೇಳಿದ್ದಾರೆ.

4. ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ತಾವು ದೂರು ನೀಡಿದ ನಂತರ ಕೆಲವು ಭಾಗಗಳನ್ನು ಮಾತ್ರ ತೆರವುಗೊಳಿಸಿದ್ದು, ಸಂಪೂರ್ಣವಾಗಿ ತೆರವುಗೊಳಿಸಿಲ್ಲವೆಂದು ಹೇಳಿದ್ದಾರೆ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಸದರಿ ಸ್ವತ್ತು ಮೂಲತಃ ಶ್ರೀ.ಲೋಕೇಶ್ ಎಂಬುವವರಿಗೆ ಸಂಬಂಧಿಸಿದ್ದು, ಆ ಸ್ವತ್ತು ಕ್ರಯದ ಮೂಲಕ ಪಡೆದ ಸ್ವತ್ತಾಗಿದೆ. ಸದರಿ ಸ್ವತ್ತಿನಲ್ಲಿ ಮನೆ ಕಟ್ಟುವ ಉದ್ದೇಶದಿಂದ ದಿ:04/05/17ರಂದು ಎದುರುದಾರರ ಕಛೇರಿಯಿಂದ ಕಟ್ಟಡ ಪರವಾನಗಿ ಪಡೆದಿರುವುದು ಕಂಡು ಬಂದಿದೆ. ಈ ಬಗ್ಗೆ ನೀಲಿ ನಕ್ಷೆಯನ್ನು ಸಹ ತಯಾರಿಸಿದೆ. ಆದರೆ, ಸದರಿ ಕಟ್ಟಡವನ್ನು ನಿರ್ಮಿಸುವ ಸಂದರ್ಭದಲ್ಲಿ ನಕ್ಷೆಗೆ ವಿರುದ್ಧವಾಗಿ ಮತ್ತು ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿ, ಕಟ್ಟಡ ನಿರ್ಮಿಸುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ದೂರುದಾರರು ಎದುರುದಾರರು, ನಗರಾಭಿವೃದ್ಧಿ ಪ್ರಾಧಿಕಾರ, ಯೋಜನಾ ನಿರ್ದೇಶಕರು ಹಾಗೂ ವಿವಿಧ ಪ್ರಾಧಿಕಾರಿಗಳಿಗೆ ದೂರು ನೀಡಿದ್ದು, ಈ ಸಂಬಂಧವಾಗಿ ಜಿಲ್ಲಾಧಿಕಾರಿಗಳು ಮತ್ತು ನಿರ್ದೇಶಕರು, ಪೌರಾಡಳಿದ ನಿರ್ದೇಶನಾಲಯ ರವರು ಸ್ಥಳ ಪರಿಶೀಲನೆ ಮಾಡಿ, ನಕ್ಷೆಗೆ ವಿರುದ್ಧವಾಗಿ ನಿರ್ಮಿಸಲಾದ ಕಟ್ಟಡಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಎದುರುದಾರರಿಗೆ ನಿರ್ದೇಶನ ನೀಡಿದ್ದಾರೆ. ಆದರೆ, ಎದುರುದಾರರು ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಿರುವುದರಿಂದ ದಿ:26/04/17ರಂದು ಕಾರಣ ಕೇಳಿ ನೋಟೀಸನ್ನು

Sd/-

ಎದುರುದಾರರಿಗೆ ಜಾರಿ ಮಾಡಿದೆ. ಎದುರುದಾರರು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಹಾಗೂ ಜಿಲ್ಲಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ, ನಿರ್ದೇಶನ ನೀಡಿದ ನಂತರ ದಿ:20/03/17ರಂದು ಸದರಿ ಕಟ್ಟಡದ ಮಾಲೀಕರಿಗೆ ಅನಧಿಕೃತ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಕೆಎಂಸಿ ಕಾಯಿದೆ, ಕಲಂ 187ರಡಿ ತಾತ್ಕಾಲಿಕ ನೋಟೀಸ್ ನೀಡಿರುವುದನ್ನು ಬಿಟ್ಟರೆ, ಬೇರೆ ಯಾವುದೇ ಕ್ರಮ ಕೈಗೊಂಡಿಲ್ಲ. ಸದರಿ ಕಟ್ಟಡದ ಮಾಲೀಕರು ಸಾರ್ವಜನಿಕ ರಸ್ತೆಯನ್ನು ಒತ್ತುವರಿ ಮಾಡಿ, ಮಂಜೂರಾತಿ ನಕ್ಷೆಗೆ ವಿರುದ್ಧವಾಗಿ ಕಟ್ಟಡ ನಿರ್ಮಿಸುತ್ತಿದ್ದು, ಈ ಸಂಬಂಧವಾಗಿ ಸಿವಿಲ್ ನ್ಯಾಯಾಲಯದಿಂದ ಯಾವುದೇ ತಾತ್ಕಾಲಿಕ ನಿರ್ಬಂಧಕಾಜ್ಞೆ ಇಲ್ಲದಿರುವುದರಿಂದ, ಎದುರುದಾರರು ಕೆಎಂಸಿ ಕಾಯಿದೆ, ಕಲಂ 462ರಡಿ ಕ್ರಮ ಕೈಗೊಂಡು ಸದರಿ ಸ್ವತ್ತಿನ ಅನಧಿಕೃತ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿದೆ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಹಾಗೂ ಜಿಲ್ಲಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ, ಸದರಿ ಕಟ್ಟಡದ ಅನಧಿಕೃತ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಎದುರುದಾರರಿಗೆ ನಿರ್ದೇಶನ ನೀಡಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

7. ಆದ್ದರಿಂದ, ಸದರಿ ಒತ್ತುವರಿಯಾಗಿರುವ ಸಾರ್ವಜನಿಕ ರಸ್ತೆ ಹಾಗೂ ಅನಧಿಕೃತ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಕಾನೂನು ರೀತಿ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 23/10/17

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.